ಕನ್ನಡಪ್ರಭ
ಶನಿವಾರ 14.10.2017

# ಕೃಷಿ ಅಭಿವೃದ್ಧಿಗೆ ಹಲವು ಯೋಜನೆ ಜಾರಿ

• **ಕನ್ನಡಪ್ರಭ ವಾರ್ತೆ** ತಿಪಟೂರು

ಕೃಷಿ ಕ್ಷೇತ್ರದಲ್ಲಿ ಆಮೂಲಾಗ್ರ ಬದಲಾವಣೆ ತರುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಹತ್ತು ಹಲವು ಯೋಜನೆ ಜಾರಿಗೆ ತಂದಿದ್ದು, ಅಧಿಕಾರಿಗಳು ರೈತರಿಗೆ ಯೋಜನೆಗಳ ಅರಿವು ಮೂಡಿಸುವ ಜೊತೆಗೆ ಅವುಗಳನ್ನು ತಲುಪಿಸುವುದರ ಮೂಲಕ ರೈತರ ಶ್ರೇಯೋಭಿವೃದ್ಧಿಗೆ ಶ್ರಮಿಸಬೇಕು ಎಂದು ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ. ಪ್ರಕಾಶ್ ಕಮ್ಮರಡಿ ತಿಳಿಸಿದರು.

ತಾಲೂಕಿನ ಕಸಬಾ ಹೋಬಳಿ ಹುಲ್ಲುಕಟ್ಟೆಯಲ್ಲಿ ಇತ್ತೀಚೆಗೆ ನಡೆದ ಕೃಷಿ ಇಲಾಖೆ, ಕೊನೇಹಳ್ಳಿ ಕೃಷಿ ವಿಜ್ಞಾನ ಕೇಂದ್ರ, ಮಣಿಪಾಲ ಕಸ್ತೂರಿ ಬಾ ವೈದ್ಯಕೀಯ ಮಹಾವಿದ್ಯಾಲಯ ಆಶ್ರಯದಲ್ಲಿ ರೈತರ ಆದಾಯ ಹಾಗೂ ಕಲ್ಯಾಣ ವೃದ್ಧಿ ಯೋಜನೆಯಡಿ ಆಯೋಜಿಸಿದ್ದ ರೈತರ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಆದಾಯದಲ್ಲಿ ಹೆಚ್ಚಳ:

ಇಡೀ ದೇಶದಲ್ಲಿ ವಿಶೇಷವೆಂಬಂತೆ ರಾಜ್ಯ ಬೆಲೆ ಆಯೋಗ ರೈತರ ಆದಾಯ ಮತ್ತು ಕಲ್ಯಾಣವೃದ್ಧಿ ಯೋಜನೆಯನ್ನು ಜಾರಿಗೆ ತಂದಿದ್ದು, ಈ ಯೋಜನೆ ರೈತರ ಆದಾಯದಲ್ಲಿ ಹೆಚ್ಚಳ ಎನ್ನುವ ಕಲ್ಪನೆಯೊಂದಿಗೆ ರೂಪಿಸಲಾಗಿದೆ. ಕೃಷಿಯಲ್ಲಿ ಆದಾಯ ಬರಬೇಕೆಂದರೆ ಸಮಗ್ರ ಕೃಷಿ ತಂತ್ರಜ್ಞಾನದ ಬಳಕೆ ಹಾಗೂ ಆದಾಯಕ್ಕೆ ಮತ್ತು ಮಣ್ಣಿನ ಆರೋಗ್ಯಕ್ಕೆ ತಕ್ಕಂತೆ ಬೆಳೆ ಬೆಳೆಯುವ ಮೂಲಕ ರೈತರು ಆದಾಯಗಳಿಸಬೇಕು. ರಾಜ್ಯದಲ್ಲಿ ಪ್ರಾಯೋಗಿಕವಾಗಿ 8 ಗ್ರಾಮಗಳನ್ನು ಆಯ್ಕೆ ಮಾಡಿದ್ದು, ಅವುಗಳಲ್ಲಿ ತಾಲೂಕಿನ ಹುಲ್ಲುಕಟ್ಟೆ ಗ್ರಾಮ ಒಂದಾಗಿದೆ. ಇಲ್ಲಿ ಕಚೇರಿ ತೆರೆದು ಮಣ್ಣಿನ ಪರೀಕ್ಷೆ ಮತ್ತು ಕೃಷಿ ಆದಾಯ ಹೆಚ್ಚಳಕ್ಕೆ ಆಗತ್ಯವಾದ ಕಾರ್ಯಕ್ರಮಗಳ ಪ್ರಯೋಗ ನಡೆಸಲಾಗುವುದು ಎಂದರು.

ಶಾಸಕ ಕೆ. ಷಡಕ್ಷರಿ ಮಾತನಾಡಿದರು.

ಮಣಿಪಾಲ ಕಸ್ತೂರಿ ಬಾ ವೈದ್ಯಕೀಯ ಮಹಾವಿದ್ಯಾಲಯ ವೈದ್ಯಾಧಿಕಾರಿ ಡಾ. ಶಂಕರ ಎಂ.ಬಕ್ಕಣ್ಣನವರ್, ತಾಪಂ ಅಧ್ಯಕ್ಷ ಎಂ.ಎನ್ ಸುರೇಶ್, ಸಾಮಾಜಿಕ ಹಾಗೂ ಆರ್ಥಿಕ ಬದಲಾವಣೆ ಅಧ್ಯಯನ ಸಂಸ್ಥೆ ತಾಂತ್ರಿಕ ಸಲಹೆಗಾರ ರಾಮಸ್ವಾಮಿ, ತಾಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್, ಈಚನೂರು ಗ್ರಾಪಂ ಅಧ್ಯಕ್ಷ ಗಿರೀಶ್, ಜಂಟಿ ಕೃಷಿ ನಿರ್ದೇಶಕಿ ರೂಪಾದೇವಿ, ಸಹಾಯಕ ಕೃಷಿ ನಿರ್ದೇಶ ಜಯಪ್ಪ, ತೋಟಗಾರಿಕೆ ಉಪನಿರ್ದೇಶಕ ಆಂಜನೇಯರೆಡ್ಡಿ, ಕೊನೇಹಳ್ಳಿ ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥೆ ಸುಕನ್ಯ, ಶಂಕರ್, ಕೃಷಿಕ ಸಮಾಜದ ಜಿಲ್ಲಾ ಪ್ರತಿನಿಧಿ ಕೆ.ಎಸ್. ಸದಾಶಿವಯ್ಯ, ಪ್ರಗತಿಪರ ರೈತ ಮಾದೀಹಳ್ಳಿ ದಯಾನಂದ್ ಇತರರು ಇದ್ದರು. ಈ ಸಂದರ್ಭದಲ್ಲಿ 100ಕ್ಕೂ ಹೆಚ್ಚು ರೈತ ಹಾಗೂ ರೈತ ಮಹಿಳೆಯರಿಗೆ ಆರೋಗ್ಯ ತಪಾಸಣೆ ನಡೆಸಲಾಯಿತು.



ಕಾರ್ಯಕ್ರಮವನ್ನು ಡಾ. ಟಿ.ಎಸ್ ಪ್ರಕಾಶ್ ಕಮ್ಮರಡಿ ಉದ್ಘಾಟಿಸಿದರು.

ವಿಜಯ ಕರ್ನಾಟಕ

ಶನಿವಾರ, 14 ಅಕ್ಟೋಬರ್ 2017

ನಮ್ಮ ತುಮಕೂರು

# ಸರಕಾರದ ಯೋಜನೆಗಳನ್ನು ರೈತರಿಗೆ ತಲುಪಿಸಿ

**ವಿಕ ಸುದ್ದಿಲೋಕ** ತಿಪಟೂರು

ರಾಜ್ಯ ಸರಕಾರ ರೈತರ ಏಳಿಗೆಗಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಈ ಯೋಜನೆಗಳನ್ನು ರೈತರಿಗೆ ಸಮರ್ಪಕವಾಗಿ ಅವರ ಬೆಳವಣಿಗೆಗೆ ಶ್ರಮಿಸಬೇಕೆಂದು ಕರ್ನಾಟಕ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ: ಟಿ.ಎನ್. ಪ್ರಕಾಶ್ ಕಮ್ಮರಡಿ ತಿಳಿಸಿದರು.

ತಾಲೂಕಿನ ಕಸಬ ಹೋಬಳಿ ಹುಲ್ಲುಕಟ್ಟೆ ಗ್ರಾಮದಲ್ಲಿ ಕೃಷಿ ಇಲಾಖೆ, ಕೊನೆಹಳ್ಳಿ ಕೃಷಿ ವಿಜ್ಞಾನ ಕೇಂದ್ರ, ಮಣಿಪಾಲ ಕಸ್ತೂರಿ ಬಾ ವೈದ್ಯಕೀಯ ಮಹಾವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ರೈತರ ಆದಾಯ ಹಾಗೂ ಕಲ್ಯಾಣವೃದ್ಧಿ ಯೋಜನೆಯಡಿ ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿ ಯೋಜನೆಯಡಿ ಆಯೋಜಿಸಿದ್ದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಡೀ ದೇಶದಲ್ಲಿ ವಿಶೇಷವೆಂಬಂತೆ ರಾಜ್ಯ ಕೃಷಿ ಬೆಲೆ ಆಯೋಗವು ರೈತರ ಆದಾಯ ಮತ್ತು ಕಲ್ಯಾಣ ವೃದ್ಧಿ ಯೋಜನೆ ಜಾರಿಗೆ ತಂದಿದ್ದು, ಈ ಯೋಜನೆ ರೈತರ ಆದಾಯದಲ್ಲಿ ಹೆಚ್ಚಳ ಎನ್ನುವ ಕಲ್ಪನೆಯೊಂದಿಗೆ ರೂಪಿಸಲಾಗಿದೆ. ಕೇಂದ್ರ ಹಾಗೂ ರಾಜ್ಯ ಸರಕಾರಗಳು ಈ ಬಗ್ಗೆ ಚಿಂತನೆ ನಡೆಸಿವೆ. ಕೃಷಿಯಲ್ಲಿ ಆದಾಯ ಬರಬೇಕೆಂದರೆ ಸಮಗ್ರ ಕೃಷಿ ತಂತ್ರಜ್ಞಾನದ ಬಳಕೆ ಹಾಗೂ ಆದಾಯಕ್ಕೆ ಮತ್ತು ಮಣ್ಣಿನ ಆರೋಗ್ಯಕ್ಕೆ ತಕ್ಕಂತೆ ಬೆಳೆ ಬೆಳೆಯುವ ಮೂಲಕ ರೈತರು ಆದಾಯ ಗಳಿಸುವ ಯೋಜನೆಯಾಗಿದೆ ಎಂದರು.



ರೈತರ ಆದಾಯ ಹಾಗೂ ಕಲ್ಯಾಣ ವೃದ್ಧಿ ಯೋಜನೆ ಕಾರ್ಯಾಲಯವನ್ನು ಕರ್ನಾಟಕ ಕೃಷಿ ಬೆಲೆ ಆಯೋಗದ ಅಧ್ಯಕ್ಷ ಡಾ: ಟಿ.ಎನ್. ಪ್ರಕಾಶ್ ಕಮ್ಮರಡಿ ಉದ್ಘಾಟಿಸಿದರು. ಶಾಸಕ ಕೆ. ಷಡಕ್ಷರಿ ಮತ್ತಿತರರು ಉಪಸ್ಥಿತರಿದ್ದರು.

ಶಾಸಕ ಕೆ. ಷಡಕ್ಷರಿ ಮಾತನಾಡಿ, ಸರಕಾರ ಕೃಷಿಕರ ಬದುಕು ಹಸನಾಗಲು ಹಲವಾರು ಯೋಜನೆಗಳನ್ನು ರೂಪಿಸಿದೆ. ಕೃಷಿಯಲ್ಲಿ ಹೈನುಗಾರಿಕೆ, ಅರಣ್ಯ ಕೃಷಿಕರಣ ಮತ್ತು ಆದಾಯದ ಬೆಳೆಗಳನ್ನು ಬೆಳೆಯಲು ಪ್ರೋತ್ಸಾಹಿಸುತ್ತಿದೆ ಎಂದರು.

ಮಣಿಪಾಲ ಕಸ್ತೂರಿ ಬಾ ವೈದ್ಯಕೀಯ ಮಹಾವಿದ್ಯಾಲಯ ವೈದ್ಯಾಧಿಕಾರಿ ಡಾ: ಶಂಕರ್, ತಾಪಂ ಅಧ್ಯಕ್ಷ ಎಂ.ಎನ್. ಸುರೇಶ್, ಈಚನೂರು ಗ್ರಾಪಂ ಅಧ್ಯಕ್ಷ ಗಿರೀಶ್, ಜಂಟಿ ಕೃಷಿ ನಿರ್ದೇಶಕಿ ರೂಪಾದೇವಿ, ಕೆ.ವಿ.ಕೆ. ಸುಕನ್ಯ, ತೋಟಗಾರಿಕೆ ಉಪನಿರ್ದೇಶಕ ಆಂಜನೇಯ ರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.